# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ–ಅಂತಿಮ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/736/ಗ್ರಾಪಂಕಾ/2012 ದಿನಾಂಕ:22.02.2013.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:LOK/INQ/14-A/125/2013/ARE-7 ದಿನಾಂಕ: 22.01.2018.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/INQ/14-A/125/2013/ARE-7 ದಿನಾಂಕ: 22.01.2018.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/50/ಗ್ರಾಪಂಕಾ/2018 ದಿನಾಂಕ:24.02.2018.
5. ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 26.03.2018.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು–7, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"The charge leveled against the DGO was that, while he was working as Secretary, Dabbeghatta Gram Panchayth, Madhugiri Taluk, Tumkur District, demanded and accepted bribe amount of Rs.1,000/- from one Shri Ramkrishnappa s/o Thimmaiah Bittanakurike Dudderi Hobli, Madhugiri Taluk (hereinafter refered to as the complainant' on 10.11.2011 for making Khata in his name. Thereby, the DGO failed to maintained absolute integrity, devotion to duty and acted in the manner unbecoming servant and committed misconduct within the meaning of Rule 3(1) (i) to (iii) of Karnataka Civil Service (Conduct) Rules 1966"

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ ದಿನಾಂಕ:10.11.2011 ರಲ್ಲಿ ಶ್ರೀ ರಾಮಕೃಷ್ಣಪ್ಪ ತಂದೆ ತಿಮ್ಮಯ್ಯ, ಬಿತ್ತನಕುರಿಕೆ ಗ್ರಾಮ ರವರ ಹೆಸರಿಗೆ ಖಾತೆ ಮಾಡುವ ಸಂಬಂಧ ಸದರಿಯವರಿಂದ ಒಂದು ಸಾವಿರ ಲಂಚದ ಹಣವನ್ನು ಅಕ್ರಮವಾಗಿ ಪಡೆಯುವ ವೇಳೆಯಲ್ಲಿ ಲೋಕಾಯುಕ್ತ ರವರ ಟ್ರ್ಯಾಪ್‌ನಲ್ಲಿ ಸಿಲುಕಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದರಿಂದ ಸದರಿ ಟ್ರ್ಯಾಪ್ ಪ್ರಕರಣವು ಲೋಕಾಯುಕ್ತರ ವಿಚಾರಣೆಯಲ್ಲಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ

ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 8(viii) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ಸೇವೆಯಿಂದ ವಜಾಗೊಳಿಸುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ ಆದ್ದರಿಂದ ಇದನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

The charge leveled against the DGO was that, while he was working as Secretary, Dabbeghatta Gram Panchayath, Madhugiri Taluk, Tumkur District, demanded and accepted bribe amount of Rs.1000/- from one Sri Ramakraishnappa S/o Thimmaiah, Bittanakurike Dodderi Hobli, Madugiri Taluk, on 10.11.2011 for making Khatha in his name. Thereby, the DGO failed to maintained absolute integrity, devotion to duty and acted in the manner unbecoming of a Government servant and committed misconduct within the meaning of Rule 3(1) (i to iii) of the Karnataka Civil Service (Conduct) Rules 1966.

The Displinary Authority, in order to establish the charge of misconduct, has examined 3 witnesses viz, complainant as PW1; shadow witness as Pw2; and Investigating Officer as Pw3; and got marked Ex.P1 to P11, whereas the DGO got himself examined as DW1 and got marked two documents as Exs D1 & D2 on his behalf.

The Inquiry Officer, considering the evidence on record, found that the Disciplinary Authority has led the evidence in full proof of the misconduct alleged against the DGO. Though the DGO got himself examined as Dw1, he could not able to disprove the charge alleged against him. The Inquiry Officer has taken into consideration the entire evidence on record has goven his finding.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

Having regard to the findings of the Inquiry Officer and also, the nature and the gravity of the misconduct alleged against the DGO, it is hereby recommended to the Government that, the DGO Shri K.Thippeswamy, Secretary, Dabbeghtta gram Panchayth, Maadugiri Taluk, Tumkur District, be punished with the penalty of 'dismissal from service' in exercise of powers under Rule 8(viii) of the Karnataka Civil Service (Classification, Control and Appeal) Rules, 1957.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ರವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು

ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ಸದರಿಯವರನ್ನು ಸೇವೆಯಿಂದ ವಜಾಗೊಳಿಸುವ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:50:ಗ್ರಾಪಂಕಾ2018 ಬೆಂಗಳೂರು, ದಿನಾಂಕ-13-07-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ ಸಾರ್ವಜನಿಕರಿಗೆ ಖಾತೆ ಮಾಡುವ ವಿಷಯದಲ್ಲಿ ಅಕ್ರಮ ಸಂಭಾವನೆ ಪಡೆಯುವಲ್ಲಿ ನಡೆಸಲಾದ ಲೋಕಾಯುಕ್ತ ಟ್ರ್ಯಾಪ್ ಪ್ರಕರಣದಲ್ಲಿ ಆರೋಪವು ಸಾಬೀತಾಗಿದ್ದು, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 8(viii) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ಸೇವೆಯಿಂದ ವಜಾಗೊಳಿಸುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/7

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

13/07

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯ್ತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ ಕೆ ತಿಪ್ಪೇಸ್ವಾಮಿ, ಕಾರ್ಯದರ್ಶಿ, ದಬ್ಬೇಗಟ್ಟ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.